# IV ದ್ವಿದಳ ಧಾನ್ಯದ ಬೆಳೆಗಳು

ಬೇಳೆ ಕಾಳು ಅಥವಾ ದ್ವಿದಳ ಧಾನ್ಯಗಳು, ಏಕದಳ ಧಾನ್ಯಗಳಿಂತ ಸುಮಾರು ಮೂರು ಪಟ್ಟು, ಅಂದರೆ ಶೇ.20 ರಿಂದ 25 ರಷ್ಟು ಸಸಾರಜನಕವನ್ನು ಹೊಂದಿರುವುದರಿಂದ, ಇವು ನಮ್ಮ ಆಹಾರದ ಒಂದು ಪ್ರಮುಖ ಅಂಗವಾಗಿವೆ. ಜೊತೆಗೆ, ಇವು ಜಾನುವಾರುಗಳಿಗೆ ಮೇವನ್ನು ಒದಗಿಸುತ್ತವೆ. ದ್ವಿದಳ ಧಾನ್ಯಗಳನ್ನು ಬೆಳೆಯುವುದರಿಂದ ಇತರೆ ಹಲವಾರು ಪ್ರಯೋಜನೆಗಳೂ ಸಹ ಇವೆ. ಅವುಗಳೆಂದರೆ, ಆಳವಾದ ಬೇರುಗಳು ಮಣ್ಣಿನ ಆಳದಲ್ಲಿರುವ ತೇವಾಂಶವನ್ನು ಸಮರ್ಥವಾಗಿ ಬಳಸಿಕೊಳ್ಳುವುದರಿಂದ ಮಳೆಯ ಅಭಾವದಲ್ಲೂ ಇಳುವರಿಯನ್ನು ಕೊಡುತ್ತವೆ. ಇವುಗಳ ಬೇರುಗಳೊಂದಿಗೆ ಅನ್ಯೋನ್ಯವಾಗಿ ಜೀವಿಸುವ ರೈಜೋಬಿಯಂ ಮತ್ತು ಇತರೆ ಸೂಕ್ಷ್ಮಾಣು ಜೀವಿಗಳು ವಾತಾವರಣದಲ್ಲಿರುವ ಸಾರಜನಕವನ್ನು ಹೀರಿ ಮಣ್ಣಿನಲ್ಲಿ ಸ್ಥಿರೀಕರಿಸಿ ಗಿಡಕ್ಕೆ ಒದಗಿಸುತ್ತವೆ. ದ್ವಿದಳ ಧಾನ್ಯಗಳನ್ನು ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಹೆಚ್ಚುತ್ತದೆ. ಆದುದರಿಂದ ಬೇಳೆಕಾಳಿನ ಬೆಳೆಗಳು ಸುಸ್ಥಿರ ಕೃಷಿಗೆ ಅತ್ಯಂತ ಅವಶ್ಯಕವಾಗಿವೆ.

**ಕೋಷ್ಟಕ:** ರಾಜ್ಯದಲ್ಲಿ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಕಾಲಗಳಲ್ಲಿ ಪ್ರಮುಖವಾಗಿ ಬೆಳೆಯುತ್ತಿರುವ ದ್ವಿದಳ ಧಾನ್ಯ ಬೆಳೆಗಳ ಒಟ್ಟು ವಿಸ್ತೀರ್ಣ, ಉತ್ಪಾದನೆ ಹಾಗೂ ಉತ್ಪಾದಕತೆ.

| ಕ್ರ.ಸಂ. | ಬೆಳೆಗಳು | ಒಟ್ಟು ವಿಸ್ತೀರ್ಣ (ಲಕ್ಷ ಎಕರೆ) | ಒಟ್ಟು ಉತ್ಪಾದನೆ (ಲಕ್ಷ. ಟನ್) | ಉತ್ಪಾದಕತೆ (ಕಿ.ಗ್ರಾಂ./ಎ) |
|---|---|---|---|---|
| 1 | ತೊಗರಿ | 22.00 | 6.30 | 250 |
| 2 | ಕಡಲೆ | 20.00 | 3.90 | 206 |
| 3 | ಹೆಸರು | 7.30 | 0.75 | 100 |
| 4 | ಉದ್ದು | 2.30 | 0.35 | 160 |
| 5 | ಅಲಸಂದೆ | 2.20 | 0.42 | 200 |
| 6 | ಅವರೆ | 1.70 | 0.66 | 408 |
| 7 | ಹುರಳಿ | 4.50 | 0.93 | 215 |
| 8 | ಇತ್ಯಾದಿ | 0.28 | 0.04 | 190 |